ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE 9/2/2021

## ಹೊರಟ್ಟಿ ನಾಮಪತ್ರ ಸಲ್ಲಿಕೆ, ಆಯ್ಕೆ ಖಚಿತ । ಕಾಂಗ್ರೆಸ್‌ನಿಂದ ನಾಸೀರ್ ಕಣಕ್ಕೆ

# ಸಭಾಪತಿ ಚುನಾವಣೆ ಇಂದು



ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ಕಾಂಗ್ರೆಸ್ ಅಭ್ಯರ್ಥಿಯಾಗಿ ನಾಜೀರ್ ಅಹಮದ್ ನಾಮಪತ್ರ ಸಲ್ಲಿಸಿದರು. ಈ ವೇಳೆ ಬಿ.ಕೆ. ಹರಿಪ್ರಸಾದ್, ನಾರಾಯಣಸ್ವಾಮಿ, ಜಮೀರ್ ಅಹಮದ್ ಸೇರಿದಂತೆ ಇನ್ನಿತರೆ ನಾಯಕರಿದ್ದರು.

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ವಿಧಾನಪರಿಷತ್ ಸಭಾಪತಿ ಚುನಾವಣೆ ಇಂದು (ಮಂಗಳವಾರ) ನಡೆಯಲಿದ್ದು, ಮಾಜಿ ಸಚಿವ ಬಸವರಾಜ ಹೊರಟ್ಟಿ ಅವರು ಆಯ್ಕೆಯಾಗುವುದು ಖಚಿತವಾಗಿದೆ.

ಬಿಜೆಪಿ-ಜೆಡಿಎಸ್ ಅಭ್ಯರ್ಥಿಯಾಗಿ ಚುನಾವಣೆಗೆ ಹೊರಟ್ಟಿ ಅವರು ಸೋಮವಾರ ನಾಮಪತ್ರ ಸಲ್ಲಿಸಿದರು. ಇನ್ನು ಕಾಂಗ್ರೆಸ್‌ಗೆ ಅಗತ್ಯ ಸಂಖ್ಯಾಬಲವಿಲ್ಲದಿದ್ದರೂ, ನಾಜೀರ್ ಅಹಮದ್ ಅವರನ್ನು ಕಣಕ್ಕಿಳಿಸಿದೆ. ಸಭಾಪತಿ ಸ್ಥಾನಕ್ಕೆ ಇಬ್ಬರು ಸ್ಪರ್ಧಿಸಿರುವುದರಿಂದ ಮಂಗಳವಾರ ಬೆಳಗ್ಗೆ ಪರಿಷತ್‌ನಲ್ಲಿ ಚುನಾವಣೆ ನಡೆಯಲಿದೆ.

ಪರಿಷತ್‌ನ ಸಭಾಪತಿಯಾಗಿದ್ದ ಪ್ರತಾಪ್ ಚಂದ್ರ ಶೆಟ್ಟಿ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದ ಹಿನ್ನೆಲೆಯಲ್ಲಿ ತೆರವಾಗಿದ್ದ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಈಗಿನ ಪರಿಷತ್ ಬಲಾಬಲದ ಪ್ರಕಾರ ಬಿಜೆಪಿ-ಜೆಡಿಎಸ್ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಬಸವರಾಜ್ ಹೊರಟ್ಟಿ ಗೆಲುವು ಖಚಿತ ಎನ್ನಲಾಗುತ್ತಿದೆ. ಕಡೇ ಕ್ಷಣದಲ್ಲಿ ಏನಾದರೂ ಪವಾಡ ನಡೆದರೆ ಮಾತ್ರ ಕಾಂಗ್ರೆಸ್‌ನ ನಾಜೀರ್ ಅಹಮ್ಮದ್ ಅವರಿಗೆ ಅದೃಷ್ಟ ಒಲಿಯಬಹುದು. ಆದರೆ ಅಂತಹ ಯಾವುದೇ ಸಾಧ್ಯತೆಯ ಲಕ್ಷಣಗಳು ಕಂಡುಬರುತ್ತಿಲ್ಲ.

ಈಗಾಗಲೇ ಉಪಸಭಾಪತಿ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಜೆಡಿಎಸ್, ಬಿಜೆಪಿಗೆ ಬೆಂಬಲ ನೀಡಿದೆ. ಆದ್ದರಿಂದ ಸಭಾಪತಿ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಅಭ್ಯರ್ಥಿಗೆ ಬೆಂಬಲ ನೀಡಬೇಕೆಂಬ ತೀರ್ಮಾನವಾಗಿದೆ. ಸದನದಲ್ಲಿ ಉಪಸಭಾಪತಿಯಾಗಿರುವ ಎಂ.ಕೆ. ಪ್ರಾಣೇಶ್ ಅವರು ಚುನಾವಣೆ ನಡೆಸಲಿದ್ದಾರೆ.

**ಕಾಂಗ್ರೆಸ್ ಸೋಲು ನಿಶ್ಚಿತ:** ಉಪಸಭಾಪತಿ ಚುನಾವಣೆಯಲ್ಲೂ ಅಭ್ಯರ್ಥಿಯನ್ನು ಕಣಕ್ಕಿಳಿಸಿದ್ದ ಕಾಂಗ್ರೆಸ್ ಸೋತಿತ್ತು. ಈ ಬಾರಿ ಸೋಲು ನಿರೀಕ್ಷಿತ. ಆದರೆ ಚುನಾವಣೆ ಆಗಲಿ ಎಂಬ ಉದ್ದೇಶದಿಂದ ಅಭ್ಯರ್ಥಿ ಕಣಕ್ಕಿಳಿಸಲು ತೀರ್ಮಾನಿಸಿದೆ ಎನ್ನಲಾಗಿದೆ. ಒಟ್ಟು 75 ಸದಸ್ಯರ ಬಲದ ಪರಿಷತ್ತಿನಲ್ಲಿ ಸದ್ಯ 74 ಸದಸ್ಯರಿದ್ದು, ಪಕ್ಷೇತರ ಸದಸ್ಯರೊಬ್ಬರ ಬೆಂಬಲ ಸೇರಿ ಒಟ್ಟು 32 ಸದಸ್ಯರ ಬಲವನ್ನು ಬಿಜೆಪಿ ಹೊಂದಿದೆ. ಎರಡನೇ ದೊಡ್ಡ ಪಕ್ಷ ಕಾಂಗ್ರೆಸ್ 29 ಸದಸ್ಯ ಬಲ ಹೊಂದಿದ್ದರೆ, ಜೆಡಿಎಸ್ 13 ಸದಸ್ಯರನ್ನು ಒಳಗೊಂಡಿದೆ.

ಬಹುಮತ ಸಾಬೀತುಪಡಿಸಲು 38 ಸದಸ್ಯರ ಬಲದ ಅಗತ್ಯವಿದೆ. ಬಿಜೆಪಿಯ 32 ಸದಸ್ಯರ ಜತೆ ಜೆಡಿಎಸ್‌ನ 13 ಸದಸ್ಯರು ಬೆಂಬಲ ಸೂಚಿಸಿದರೆ, ಅಲ್ಲಿಗೆ 45 ಸದಸ್ಯರ ಬಲದೊಂದಿಗೆ ಸಭಾಪತಿ ಆಯ್ಕೆ ಆಗಲಿದೆ. ಕಾಂಗ್ರೆಸ್ ಲೆಕ್ಕಕ್ಕೆ ಮಾತ್ರ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕಿದೆ.

### ಎಲ್ಲರೂ ಬೆಂಬಲಿಸುವ ವಿಶ್ವಾಸವಿದೆ

ವಿಧಾನ ಪರಿಷತ್ ಸಭಾಪತಿ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯನ್ನು ಕಣಕ್ಕಿಳಿಸಿರುವ ಬಗ್ಗೆ ನಾನು ಮಾತನಾಡುವುದಿಲ್ಲ. ಈಗ ನನಗೆ ಒಳ್ಳೆಯ ಅವಕಾಶ ಬಂದಿದೆ. ಪಕ್ಷದ ನಿರ್ದೇಶನದ ಮೇರೆಗೆ ನಾಮಪತ್ರ ಸಲ್ಲಿಸಿದ್ದೇನೆ ಎಂದು ಜೆಡಿಎಸ್‌ನ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಹೇಳಿದ್ದಾರೆ. ಸಭಾಪತಿ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಹೊರಟ್ಟಿ, ಬಿಜೆಪಿಯ ಬೆಂಬಲದೊಂದಿಗೆ ನಾಮಪತ್ರ ಸಲ್ಲಿಸಿದ್ದೇನೆ. ಕಾಂಗ್ರೆಸ್‌ನವರು ಅಭ್ಯರ್ಥಿ ಹಾಕಿರುವ ವಿಚಾರವಾಗಿ ನಾನು ಪ್ರತಿಕ್ರಿಯಿಸುವುದಿಲ್ಲ. ಅದು ಅವರ ಪಕ್ಷದ ನಿರ್ಧಾರ. ಚುನಾವಣೆಯಲ್ಲಿ ತಮಗೆ ಗೆಲುವು ಖಚಿತ ಎಂದು ಹೇಳಿದರು.

ಬಸವರಾಜ ಹೊರಟ್ಟಿ ಅವರು ಸತತ ಏಳು ಬಾರಿ ಶಿಕ್ಷಕರ ಕ್ಷೇತ್ರದಿಂದ ಮೇಲ್ಮನೆಗೆ ಬಂದಿದ್ದಾರೆ. ಅವರೊಬ್ಬ ಹಿರಿಯ ನಾಯಕರು ಮೂರೂ ಪಕ್ಷಗಳು ನಮ್ಮ ಅಭ್ಯರ್ಥಿಯೆಂದೇ ಭಾವಿಸಿ ಮತ ಹಾಕಬೇಕು. ಇಲ್ಲಿ ಯಾರೂ ಪಕ್ಷ ರಾಜಕಾರಣ ಮಾಡಬಾರದು.

– ವೈಎಸ್‌ವಿ ದತ್ತಾ ಜೆಡಿಎಸ್ ಮುಖಂಡ